ದಿನಾಂಕ 16.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ:- 1 ರಿಂದ 4 ನೇ ಪ್ರತಿವಾದಿ ಪರ ವಕೀಲರಾದ ಶ್ರೀ. ಸಿ.ಎಸ್.ಕೆ ರವರಿಂದ:-**

1. ನಾನು ಈ ದಾವೆಯಲ್ಲಿ 3ನೇ ಪ್ರತಿವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ, ಅರ್ಥೈಸಿಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನನ್ನ ವಕೀಲರು ಸಿದ್ದಪಡಿಸಿದ್ದಾರೆ.

2. ದಿನಾಂಕ **07.03.2025** ರ ನೋಂದಾಯಿತ ಕ್ರಯಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸುತ್ತಿದ್ದು, ನಿ.ಡಿ**-16** ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಹಾಜರು ಇದ್ದು, ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.